# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 138 ಜೆ.ಜೆ.ಆರ್ ನಗರ ಬೆಂಗಳೂರು

**********************************************************************************

ಸಂಖ್ಯೆ: w-137/Committee/Proceding -26/2021-22 ದಿ.23-11-2021

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 137

**23-11-2021** ರಂದು ಬೆಳಿಗ್ಗೆ **11.30** ಘಂಟೆಗೆ ವಾರ್ಡ್ ಸಂಖ್ಯೆ: **137** ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: **10-09-2020**ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿಯ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ.ಮೊಹಮದ್ ಜಾವೀದ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ತಗ್ಗು ಪ್ರದೇಶಗಳನ್ನು ಗುರ್ತಿಸಿ ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆಯನ್ನು ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳನ್ನು ಪರಿವೀಕ್ಷಣೆ ಮಾಡಿ ಅದರಲ್ಲಿ ತಗ್ಗು ಪ್ರದೇಶವಾದಲ್ಲಿ ಸಿವಿಲ್ ಡಿಫೇನ್ಸ್ ಸಿಬ್ಬಂದಿ ಮತ್ತು ಗ್ಯಾಗ್‌ಮೇನ್‌ಗಳನ್ನು ಉಪಯೋಗಿಸಿಕೊಂಡು ಅವಶ್ಯಕವಾದ ಕಾಮಗಾರಿಯನ್ನು ನಿರ್ವಹಿಸಿರುವುದಾಗಿ ಸಭೆಗೆ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮಳೆ ನೀರು ಚರಂಡಿಗಳನ್ನು ಪರಿವೀಕ್ಷಣೆ ಮಾಡಿ ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆಯನ್ನು ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಸ್,ಡಬ್ಲ್ಯೂ.ಡಿ ಮೋರಿಗಳನ್ನು ಪರಿವೀಕ್ಷಣೆ ಮಾಡಿ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲ ಎಸ್ ಎಸ್.ಡಬ್ಲ್ಯೂ.ಡಿ ಮೋರಿಗಳು ಗೋಡೆಗಳು ಮತ್ತು ಫೇನ್ಸಿಗ್ ಸುರಕ್ಷಿತವಾಗಿವೆ

ಸಭಾ ಸದಸ್ಯರು ವಾರ್ಡ್ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ ಸಭೆಯುಲ್ಲಿ ಪ್ರಸ್ತಾಪಿಸಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರಸ್ತೆ ಗುಂಡಿಗಳನ್ನು ಗುರ್ತಿಸಿದ್ದು ಹಾಗೂ ಗುಂಡಿಗಳನ್ನು ಮುಚ್ಚಿರುವ ಬಗ್ಗೆ ಸಭೆಯಲ್ಲಿ ತಿಳಿಸುತ್ತಾ ಇನ್ನು ಕೆಲವು ರಸ್ತೆ ಗುಂಡಿಗಳನ್ನು ಮಳೆಗಾಲವಿರುವುದರಿಂದ ರಸ್ತೆ ಗುಂಡಿಗಳನ್ನು ಮುಚ್ಚುವುದು ಸಾಧ್ಯವಿರುವುದಿಲ್ಲ, ಹಾಗೂ 2021-22ನೇ ಸಾಲಿನ ಕಾರ್ಯಕ್ರಮಗಳ ಪಟ್ಟಿಯಲ್ಲಿ ವಾರ್ಡ್‌ಗಳಿಗೆ 20.00 ಲಕ್ಷವನ್ನು ಮೀಸಲಿರಿಸಿದ್ದು ಮುಂದಿನ ದಿನಗಳಲ್ಲಿ ಮಳೆ ಕಡಿಮೆಯಾದ ಮೇಲೆ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತ ಮತ್ತು ಬಿ. ಖಾತಾದಲ್ಲಿ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ಮಾನ್ಯ ಆಯುಕ್ತರ ಆದೇಶದಂತೆ ನೋಟಿಸ್ ನೀಡುತ್ತಿರುವ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಬಿ. ಖಾತಾದಲ್ಲಿ ಮತ್ತು ನಕ್ಷೆ ಮಂಜೂರಾತಿ ಇಲ್ಲದೆ ಕಟ್ಟಡ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ಬಿ.ಬಿ.ಎಂ.ಪಿ ಕಾಯ್ದೆ 2020 ರ ಕಾಲಂ 313 ಪ್ರಕಾರ ನೋಟೀಸ್ ಜಾರಿ ಮಾಡಿ 137ರ ವ್ಯಾಪ್ತಿಯಲ್ಲಿ ನೀಡಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಶಿಥಿಲಗೊಂಡ ಕಟ್ಟಡಗಳನ್ನು ಗುರ್ತಿಸಿ ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಪರಿವೀಕ್ಷಣೆ ನಡೆಸಿದಾಗ ಯಾವುದೇ ಶಿಥಿಲಗೊಂಡಿರುವ ಕಟ್ಟಡವು ಕಂಡುಬಂದಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲ್ಯೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ಮತದಾರರ ಗುರ್ತಿನ ಚೀಟಿಯ ಬಗ್ಗೆ ವಿವರಣೆ ಕೋರಿದರು.

ಸಂಬಂಧಿಸಿದ ಕಂದಾಯ ಅಧಿಕಾರಿಗಳು ಸಭೆಯಲ್ಲಿ ಮತದಾರರ ಗುರ್ತಿನ ಚೀಟಿ ಕರಡು ಪ್ರತಿಯನ್ನು ನೋಟಿಸ್ ಬೋರ್ಡ್‌ನಲ್ಲಿ ಹಾಕಿ ತಿದ್ದುಪಡಿ ಮಾಡಲು ಹಾಗೂ ಹೊಸದಾಗಿ ಸೇರಿಸಲು ಸಾರ್ವಜನಿಕರಿಗೆ ತಿಳಿಸಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದ್ದರು

ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 ಇತ್ತಿಚೆಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ತೆಗೆದು ಕೊಳ್ಳಲು ಅಧಿಕ ಜನರಿಗೆ ಮನಹೊಲಿಸಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು..

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಘನತ್ಯಾಜ್ಯ ವಿಲೇವಾರಿಯ ಬಗ್ಗೆ ಸಭೆಯಲ್ಲಿ ಸಂಬಂಧಿಸಿದವರಿಂದ ವಿವರಣೆ ನೀಡುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರು, ವಾಹನಗಳನ್ನು ಉಪಯೋಗಿಸಿಕೊಂಡು ಉತ್ತಮ ರೀತಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ನೀಡಿದರು,

ಮಾನ್ಯ ಸದಸ್ಯರು ವಾರ್ಡ್-137ರ ವ್ಯಾಪ್ತಿಯಲ್ಲಿ ಕೆಲವುದಿನಗಳಿಂದ ಸುರಿಯುತ್ತಿರುವ ಮಳೆಯಿಂದ ಹಲವು ರೀತಿಯಲ್ಲಿ ಬೇಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು, ಈ ವಿಷಯದ ಬಗ್ಗೆ ತಾವು ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಕೋರಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಾಂ) ರವರ ಪ್ರತಿನಿದಿಯು 24*7 **helpline** ಗೆ ಬರುವಂತೆ ದೂರುಗಳನ್ನು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಪರಿಹರಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

---5